## 108. ರಾಜ್ಯದಲ್ಲಿ ಶಿಕ್ಷಣ ಸುಧಾರಣೆಗೆ ದೊರೆಸ್ವಾಮಿ ನೇತೃತ್ವದ ಸಮಿತಿ

ರಾಜ್ಯದಲ್ಲಿರುವ ಶಿಕ್ಷಣ ಸಂಸ್ಥೆಗಳಿಗೆ ಮಾರ್ಗಸೂಚಿ ರಚನೆ ಮತ್ತು ಅನುಷ್ಠಾನಕ್ಕಾಗಿ ಶಿಕ್ಷಣ ಸುಧಾರಣೆಗಳ ಸಲಹೆಗಾರ ಪ್ರೊ.ಎಂ.ಆರ್. ದೊರೆಸ್ವಾಮಿ ನೇತೃತ್ವದಲ್ಲಿ ಎಂಟು ಸದಸ್ಯರ ಸಮಿತಿ ರಚಿಸಲಾಗಿದೆ.

ಪ್ರಾಥಮಿಕ ಶಾಲಾ ಹಂತದಿಂದ ವಿಶ್ವವಿದ್ಯಾಲಯದ ಹಂತದವರೆಗೆ ಶಿಕ್ಷಣದ ಮಾರ್ಗಸೂಚಿ ಅನುಷ್ಠಾನ ಹಾಗೂ ಇತರೆ ರೂಪರೇಷೆಗಳನ್ನು ಸಿದ್ಧಪಡಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಮಹತ್ತರ ಸುಧಾರಣೆ ತರಬೇಕಿದೆ. ಈ ಸುಧಾರಣೆ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವುದಕ್ಕಾಗಿ ಶಿಕ್ಷಣ ತಜ್ಞರ ಸಮಿತಿ ರಚಿಸಲಾಗಿದ್ದು, ಪ್ರೊ.ಎಂ.ಆರ್.ದೊರೆಸ್ವಾಮಿ ಅವರು ಸಮಿತಿ ಅಧ್ಯಕ್ಷರು, ರೇವಾ ವಿವಿ ಕುಲಪತಿ ಡಾ.ಪಿ.ಶ್ಯಾಮರಾಜು, ವಿಶ್ರಾಂತ ಕುಲಪತಿಗಳಾದ ಪ್ರೊ.ಹೆಚ್.ಪಿ.ಖಿಂಚ, ಪ್ರೊ.ಕೆ.ಸಿದ್ದಪ್ಪ, ಪ್ರೊ.ಬಿಸಲಯ್ಯ, ಬೆಂ.ವಿವಿ ಕುಲಪತಿ ಪ್ರೊ.ಎಸ್.ಜಾಫೆಟ್, ಮೈಸೂರು ವಿವಿ ಕುಲಪತಿ ಡಾ.ಹೇಮಂತ್‌ಕುಮಾರ್, ಪಿಇಎಸ್ ವಿವಿ ಕುಲಪತಿ ಡಾ.ಸೂರ್ಯಪ್ರಸಾದ್, ಇಂಡಿಯನ್ ಅಕಾಡೆಮಿ ಅಧ್ಯಕ್ಷ ಡಾ.ಸೋಮಶೇಖರ್ ಹಾಗೂ ನಿವೃತ್ತ ಪ್ರಾಧ್ಯಾಪಕ ಡಾ.ಆರ್.ನಾಗರಾಜಯ್ಯ ಸಮಿತಿ ಸದಸ್ಯರಾಗಿದ್ದಾರೆ.

ಆಧಾರ:ಕನ್ನಡಪ್ರಭ, ದಿನಾಂಕ:11.06.2020